# <u>ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು</u>

**ವಿಷಯ:** 2017–18ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಇಲಾಖಾ ವತಿಯಿಂದ ನೂತನವಾಗಿ ಪ್ರಾರಂಭಗೊಂಡಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಪ.ಪೂ ಕಾಲೇಜು/ಮಾದರಿ ವಸತಿ ಶಾಲೆ(ನವೋದಯ) ನಿರ್ವಹಣೆಗೆ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 169 ಎಂಡಿಎಸ್ 2017 ದಿನಾಂಕ: 06.04.2017
2) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲೂಡಿ 169 ಎಂಡಿಎಸ್ 2017 ದಿನಾಂಕ: 25.04.2017

******

**<u>ಪ್ರ ಸ್ತಾ ವ ನೆ:–</u>**

ಉಲ್ಲೇಖ (1) ರ ಸರ್ಕಾರಿ ಆದೇಶದಲ್ಲಿ 2016–17 ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2017–18 ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆಗೆ ಮೊದಲನೇ ತ್ರೈಮಾಸಿಕ ಕಂತಾಗಿ ರೂ.3317.75 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ರಾಜ್ಯದಲ್ಲಿ ನೂತನವಾಗಿ ಪ್ರಾರಂಭಗೊಂಡಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಕಛೇರಿ ವೆಚ್ಚ, ವಿದ್ಯುತ್, ಆಹಾರ ವೆಚ್ಚ, ನೀರು ಪೂರೈಕೆ ವೆಚ್ಚ ಹಾಗೂ ಇತರೆ ವೆಚ್ಚಗಳ (ಶಾಲಾವಾರು ವೆಚ್ಚ ಹಾಗೂ ಅನುದಾನದ ವಿವರ ಪ್ರತ್ಯೇಕ ಅನುಬಂಧದಲ್ಲಿ ಕಳುಹಿಸಲಾಗಿದೆ.) ನಿರ್ವಹಣೆಗೆ ಅನುದಾನವನ್ನು ಒಟ್ಟು ರೂ.166.55ಲಕ್ಷ(ಒಂದು ನೂರ ಅರವತ್ತಾರು ಲಕ್ಷದ ಐವತ್ತೈದು ಸಾವಿರ ರೂಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ.

## ಆದೇಶ

**ಸಂಖ್ಯೆ: ಅಸಂನಿ/ವಶಾ/ಅನು/ಸಿಆರ್–04/2017–18** **ದಿನಾಂಕ: 26.08.2017**

ಪ್ರಸ್ತಾವನೆಗಳಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ, ರಾಜ್ಯದಲ್ಲಿ ನೂತನವಾಗಿ ಪ್ರಾರಂಭಗೊಂಡಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆ(ನವೋದಯ) ಕಛೇರಿ ವೆಚ್ಚ, ವಿದ್ಯುತ್, ಆಹಾರ ವೆಚ್ಚ, ನೀರು ಪೂರೈಕೆ ವೆಚ್ಚ ಹಾಗೂ ಇತರೆ ವೆಚ್ಚಗಳ (ಶಾಲಾವಾರು ವೆಚ್ಚ ಹಾಗೂ ಅನುದಾನದ ವಿವರ ಪ್ರತ್ಯೇಕ ಅನುಬಂಧದಲ್ಲಿ ಕಳುಹಿಸಲಾಗಿದೆ.) ನಿರ್ವಹಣೆಗೆ ಅನುದಾನವನ್ನು ಒಟ್ಟು ರೂ.166.55ಲಕ್ಷ(ಒಂದು ನೂರ ಅರವತ್ತಾರು ಲಕ್ಷದ ಐವತ್ತೈದು ಸಾವಿರ ರೂಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ **ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ** ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಅನುದಾನ ಬಿಡುಗಡೆ ಮಾಡಿದೆ.

**ನಿಬಂಧನೆಗಳು:–**

1) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಕಡ್ಡಾಯವಾಗಿ 2017–18ನೇ ಸಾಲಿನ ವಸತಿ ಶಾಲೆಗಳ ಅನುಬಂಧ–02ರಲ್ಲಿ ನಮೋದಿಸಿರುವ ವೆಚ್ಚದ ಬಿಲ್ಲುಗಳ ಪಾವತಿಗೆ ಮಾತ್ರ ಭರಿಸತಕ್ಕದ್ದು.
2) ಈ ಆದೇಶದಲ್ಲಿ ಬಿಡುಗಡೆ ಮಾಡಲಾದ ಅನುದಾನವನ್ನು ಅನುಬಂಧ–02ರಲ್ಲಿ <u>ಶಾಲಾವಾರು, ವೆಚ್ಚವಾರು ನಮೂದಿಸಿರುವಂತೆ ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಸಿಕೊಳ್ಳತಕ್ಕದ್ದು,</u> ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡುವಂತಿಲ್ಲ. ತಪ್ಪಿದ್ದಲ್ಲಿ ಮುಂದಿನ ಎಲ್ಲಾ ಆಗು ಹೋಗುಗಳಿಗೆ ತಮ್ಮನ್ನು ನೇರ ಹೊಣೆಗಾರನ್ನಾಗಿ ಮಾಡಲಾಗುವುದು.

Contd......2

3) ಬಿಡುಗಡೆ ಮಾಡಿರುವ ಅನುದಾನದಲ್ಲಿ ಭರಿಸಬೇಕಾದ ವೆಚ್ಚಗಳ ವಿವರ ಈ ಕೆಳಕಂಡಂತಿದೆ ಹಾಗೂ ಶಾಲಾವಾರು ವಿವರ ಜಿಲ್ಲೆ/ವಸತಿ ಶಾಲೆಗಳಿಗೆ ಪ್ರತ್ಯೇಕವಾಗಿ ಅನುಬಂಧದಲ್ಲಿ ಈ ಆದೇಶದೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

   I. ಆಹಾರ ವೆಚ್ಚ ಪ್ರತಿ ಮಾಹೆಗೆ,ಪ್ರತಿ ವಿದ್ಯಾರ್ಥಿಗೆ ರೂ.1500.00 ಬಿಡುಗಡೆಗೊಳಿಸಲಾಗಿದೆ.

   II. ಕಛೇರಿ (ಪೇಪರ್, ಸೀಮೆಸುಣ್ಣ, ಡೆಸ್ಟರ್ ಇತ್ಯಾಧಿ), ವಾರ್ತಾ ಪತ್ರಿಕೆ ಮತ್ತು ಗ್ರಂಥಾಲಯಕ್ಕೆ ಅಗತ್ಯ ವಸ್ತುಗಳ ಖರೀದಿ, ಪ್ರಯೋಗಾಲಯಕ್ಕೆ ಅಗತ್ಯ ವಸ್ತುಗಳ ಖರೀದಿ, ಕ್ರೀಡಾ ಮತ್ತು ಸಾಂಸ್ಕೃತಿಕ ವೆಚ್ಚ, ರಾಷ್ಟ್ರೀಯ ಹಬ್ಬಗಳ ದಿನಾಚರಣೆಯ ವೆಚ್ಚ, ವೈದ್ಯಕೀಯ ವೆಚ್ಚಗಳು 6 ತಿಂಗಳ ಅವಧಿಗೆ ಹಾಗೂ ಡ್ರಾಯಿಂಗ್ ವಸ್ತುಗಳ ಖರೀದಿ, ಪಠ್ಯಪುಸ್ತಕ ಶಿಕ್ಷಣ ಇಲಾಖೆಯಿಂದ ಪಡೆಯಲು, 6ನೇ ತರಗತಿ ವಿದ್ಯಾರ್ಥಿಗಳಿಗೆ ತಟ್ಟೆ, ಲೋಟ, ಟ್ರಂಕ್‌ಗಳ ಖರೀದಿಗೆ ವಾರ್ಷಿಕ ಮತ್ತು ಕಟ್ಟಡಗಳ ಸಣ್ಣಪುಟ್ಟ ರಿಪೇರಿ ವೆಚ್ಚಗಳಿಗೆ ತ್ರೈಮಾಸಿಕ ಅನುದಾನ ಬಿಡುಗಡೆಗೊಳಿಸಲಾಗಿದೆ.

   III. ಸಂಬಂಭಪಟ್ಟ ಶಾಲೆಗಳ ಅವಶ್ಯಕತೆಗೆ ತಕ್ಕಂತೆ ತಟ್ಟೆ, ಲೋಟ, ಸ್ಟ್ಯಾಂಡ್, ಟ್ರಂಕ್, ಗ್ಯಾಸ್ ಒಲೆ, ಗ್ಯಾಸ್ ಪೈಪ್ ಲೈನ್, ರೆಫ್ರಿಜರೇಟರ್ ಹಾಗೂ ಅಡುಗೆ ಮನೆಗೆ ಅವಶ್ಯವಿರುವ ಸಾಮಾನುಗಳನ್ನು ಖರೀದಿಸತಕ್ಕದ್ದು.

   IV. ಕಟ್ಟಡಗಳ ಸಣ್ಣಪುಟ್ಟ ರಿಪೇರಿ ವೆಚ್ಚಕ್ಕೆ ಬಿಡುಗಡೆಯಾದ ಅನುದಾನವನ್ನು ಶಾಲೆಯ ಅವಶ್ಯಕತೆಗೆ ತಕ್ಕಂತೆ ಚರಂಡಿ, ಸೆಪ್ಟಿಕ್ ಟ್ಯಾಂಕ್, ಬಾತ್ ರೂಮಿನ ಬಾಗಿಲು ಕಿಟಕಿಗಳ ರಿಪೇರಿ ಹಾಗೂ ಆವರಣದ ಸ್ವಚ್ಛತೆಗೆ ಬಳಸಿಕೊಳ್ಳತಕ್ಕದ್ದು.

   V. ವಿದ್ಯಾರ್ಥಿಗಳಿಗೆ ವಿತರಿಸಲು ಪಠ್ಯಪುಸ್ತಕಗಳನ್ನು ಶಾಲಾ/ಕಾಲೇಜು ಹಂತದಲ್ಲಿ ಖರೀದಿಸಲು ಕ್ರಮಕೈಗೊಳ್ಳುವುದು.

4) ಎಲ್ಲಾ ಖರೀದಿ, ರಿಪೇರಿ ಹಾಗೂ ಸೇವೆಗಳನ್ನು ಕಡ್ಡಾಯವಾಗಿ ಕೆ.ಟಿ.ಪಿ.ಪಿ. ಕಾಯ್ದೆ ನಿಯಮಾನುಸಾರ ಖರ್ಚು ಭರಿಸತಕ್ಕದ್ದು.

5) ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನ ಭರಿಸಿದ ವಿವರ ಪ್ರತಿ ತಿಂಗಳು 5ನೇ ತಾರೀಖಿನ ಒಳಗೆ (ಖಜಾನೆಯಿಂದ ಪಡೆದ 62ಬಿ ಪ್ರತಿಯೊಂದಿಗೆ) ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಆಬ್ಜೆಕ್ಟ್ ಕೋಡ್ (059) ಲೆಕ್ಕಶೀರ್ಷಿಕೆ 2225-03-277-2-80 ಅಲ್ಪಸಂಖ್ಯಾತರ ವಸತಿ ಶಾಲೆಗಳ ನಿರ್ವಹಣೆ ರಾಜ್ಯವಲಯ ಯೋಜನೆ 2017-18 ನೇ ಸಾಲಿನಲ್ಲಿ ಒದಗಿಸಿರುವ ಆಯವಯ್ಯದಲ್ಲಿ ಭರಿಸುವುದು.

(ಅಕ್ರಂ ಪಾಷ)
ನಿರ್ದೇಶಕರು,
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

<u>ಪ್ರತಿಯನ್ನು:-</u>

1. ಕರ್ನಾಟಕ ಮಹಾಲೇಖಪಾಲರು, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
3. ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವೆಚ್ಚ-3, ಬೆಂಗಳೂರು.
4. ಉಪ ನಿರ್ದೇಶಕರು, ಖಜಾನೆ ಗಣಕೀಕರಣ ಕೇಂದ್ರ, 2ನೇ ಮಹಡಿ, ಖನಿಜ ಭವನ, ಬೆಂಗಳೂರು.
5. ಸಂಬಂಧಪಟ್ಟ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಗತ್ಯಕ್ರಮಕ್ಕಾಗಿ ಹಾಗೂ ಪ್ರಾಂಶುಪಾಲರಿಗೆ (ಜಿಲ್ಲಾ ಅಧಿಕಾರಿಗಳ ಮೂಲಕ)
6. ಸಂಬಂಧಪಟ್ಟ ಜಿಲ್ಲಾ ಖಜಾನಾಧಿಕಾರಿಗಳು.
7. ಲೆಕ್ಕಪತ್ರ ಶಾಖೆ.
8. ಹೆಚ್ಚುವರಿ ಪ್ರತಿ/ಕಛೇರಿ ಪ್ರತಿ.